ಮಧುಗಿರಿಯ ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯದಲ್ಲಿ

**ಸಿ.ಸಿ. ಸಂಖ್ಯೆ: 35/2025**

ಪ್ರ.ವ.ಬೋ.ತಾಃ 24-07-2026

ಚಾಸಾಃ 6 ಫ್ರಾಸಾಃ 4

| | |
|---|---|
| ಸಾಕ್ಷಿಯ ಹೆಸರು | ನರಸಿಂಹಮೂರ್ತಿ |
| ತಂದೆ/ಗಂಡನ ಹೆಸರು | ಲಕ್ಷ್ಮೀನರಸಪ್ಪ |
| ವಯಸ್ಸು | 32 ವರ್ಷ |
| ವೃತ್ತಿ | ಚಾಲಕ ವೃತ್ತಿ |
| ವಾಸ | ಕಸಿನಾಯಕನಳ್ಳಿ, ಮಧುಗಿರಿ ತಾ. |

**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ. ರವರಿಂದಃ-**

ನನಗೆ ಆರೋಪಿತರು ಗೊತ್ತು. ಚಾಸಾ.1 ನನ್ನ ತಮ್ಮ, ಚಾಸಾ.2 ನನ್ನ ಹೆಂಡತಿ, ಚಾಸಾ.3 ನನ್ನ ತಂಗಿ, ಚಾಸಾ.4 ಅಕ್ಕ, ಚಾಸಾ.5 ನನ್ನ ತಮ್ಮ. ಆರೋಪಿತರು ಎಂದೂ ಸಹ ಅಪರಾಧ ಎಸಗುವ ಸಮಾನ ಉದ್ದೇಶದಿಂದ ಚಾಸಾ.2 ರವರ ಮನೆಗೆ ಅಕ್ರಮ ಪ್ರವೇಶ ಮಾಡಿಲ್ಲ, ಅವಾಚ್ಯ ಶಬ್ದಗಳಿಂದ ಬೈದಿಲ್ಲ, ಚಾಸಾ.1 ರಿಂದ 5 ರವರಿಗಾಗಲೀ ಕೈಗಳಿಂದ, ದೊಣ್ಣೆಯಿಂದ ಹಲ್ಲೆ ಮಾಡಿ, ಸಾಮಾನ್ಯ ಹಾಗೂ ತೀವ್ರ ಸ್ವರೂಪದ ಗಾಯಪಡಿಸಿರುವುದಿಲ್ಲ ಹಾಗೂ ಜೀವ ಬೆದರಿಕೆ ಹಾಕಿರುವುದಿಲ್ಲ. ಅಲ್ಲದೇ ಚಾಸಾ.2 ರವರ ಮನೆಯ ಕಿಟಕಿ ಗಾಜುಗಳನ್ನು ಹೊಡೆದು ಹಾಕಿ ಯಾವುದೇ ನಷ್ಟ ಉಂಟು ಮಾಡಿರುವುದಿಲ್ಲ. ಈ ಸಂಬಂಧವಾಗಿ ಚಾಸಾ.1 ರಿಂದ 5 ರವರು ಯಾವುದೇ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿರುವುದಿಲ್ಲ. ನ್ಯಾಯಾಲಯದ ಮುಂದಿರುವ ಇಟ್ಟಿಗೆ ಚೂರು, ಗಾಜಿನ ಚೂರು

ಮತ್ತು ದೊಣ್ಣೆಗಳನ್ನು ಯಾವ ಉದ್ದೇಶಕ್ಕಾಗಿ ಅಮಾನತ್ತುಪಡಿಸಿಕೊಂಡರು ಎಂಬುದು ನನಗೆ ಗೊತ್ತಿಲ್ಲ. ಈ ಸಂಬಂಧವಾಗಿ ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಸಸಅ ರವರ ವಿನಂತಿ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ- ಮಾನ್ಯ ಸ.ಸ.ಅ. ರವರಿಂದಃ-**

ದಿಃ 15.12.2024 ರಂದು ಸಂಜೆ 4.00 ಗಂಟೆ ಸಮಯದಲ್ಲಿ ಆರೋಪಿತರು ಅಪರಾಧ ಎಸಗುವ ಸಮಾನ ಉದ್ದೇಶದಿಂದ ಚಾಸಾ.1 ರಿಂದ 5 ರವರು ಮಾತನಾಡುತ್ತಾ ಕುಳಿತಿದ್ದಾಗ, ಆರೋಪಿತರು ಹಳೆಯ ದ್ವೇಷದ ಹಿನ್ನೆಲೆಯಲ್ಲಿ ಚಾಸಾ.2 ರವರ ಮನೆಗೆ ಅಕ್ರಮ ಪ್ರವೇಶ ಮಾಡಿ ನನ್ನ ಹಾಗೂ ಚಾಸಾ1 ರಿಂದ 5 ರವರನ್ನು ಅವಾಚ್ಯ ಶಬ್ದಗಳಿಂದ ಬೈದು, 1 ನೇ ಆರೋಪಿ ಚಾಸಾ.2 ರವರಿಗೆ ಕಾಲಿನಿಂದ ಹೊಟ್ಟೆಗೆ ಒದ್ದು, ಕೈ ಹಿಡಿದು ಎಳೆದಾಡಿ, ಚಾಸಾ.2 ರವರ ತಲೆಗೆ ಹೊಡೆದು ನೋವುಂಟುಪಡಿಸಿ, 2 ನೇ ಆರೋಪಿ ದೊಣ್ಣೆಯಿಂದ ಚಾಸಾ.3 ರವರ ತಲೆಗೆ ಹೊಡೆದು, 4 ನೇ ಆರೋಪಿ ಚಾಸಾ.4 ರವರಿಗೆ ದೊಣ್ಣೆಯಿಂದ ತಲೆಗೆ, ಎಡಗೈ, ಹಾಗೂ ಎಡಗಾಲಿನ ತೊಡೆಗೆ ಹೊಡೆದು, 1 ನೇ ಆರೋಪಿ ದೊಣ್ಣೆಯಿಂದ ಚಾಸಾ.1 ರವರ ತಲೆಗೆ ಮತ್ತು ಎಡ ಮೊಣಕೈಗೆ ಹೊಡೆದು, 3 ನೇ ಆರೋಪಿ ಅದೇ ದೊಣ್ಣೆಯಿಂದ ಚಾಸಾ.5 ರವರ ತಲೆಗೆ ಹೊಡೆದು ಸಾಮಾನ್ಯ ಹಾಗೂ ತೀವ್ರ ಸ್ವರೂಪದ ಗಾಯವನ್ನುಂಟುಪಡಿಸಿ, ಚಾಸಾ.2 ರವರ ಮನೆಯ ಕಿಟಕಿ ಗಾಜುಗಳನ್ನು

ಹೊಡೆದು ಸುಮಾರು ಒಂದು ಸಾವಿರ ನಷ್ಟಪಡಿಸಿದ್ದು, ಆರೋಪಿತರೆಲ್ಲರೂ ನನಗೆ, ಚಾಸಾ.1 ರಿಂದ 5ರವರಿಗೆ ಜೀವ ಬೆದರಿಕೆ ಹಾಕಿದರು ಎಂದರೆ ಸರಿಯಲ್ಲ. ಈ ಸಂಬಂಧವಾಗಿ ಚಾಸಾ.1 ರಿಂದ 5ರವರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದೆವು ಎಂದರೆ ಸರಿಯಲ್ಲ. ಆ ದಿನ ಆರೋಪಿತರು ನ್ಯಾಯಾಲಯದ ಮುಂದಿರುವ ಇಟ್ಟಿಗೆ ಚೂರು ಮತ್ತು ದೊಣ್ಣೆಗಳಿಂದ ಹಲ್ಲೆ ಮಾಡಿದರು ಎಂದರೆ ಸರಿಯಲ್ಲ. ಈ ಬಗ್ಗೆ ನಾನು ಪೊಲೀಸರ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಆ ಅಲ್ಲಗೆಳೆದ ಹೇಳಿಕೆಯನ್ನು ನಿಪಿ.9 ಎಂದು ಗುರುತಿಸಲಾಯಿತು. ನಾನು, ಚಾಸಾ.1 ರಿಂದ 5 ಹಾಗೂ ಆರೋಪಿತರು ನ್ಯಾಯಾಲಯದ ಹೊರಗೆ ರಾಜೀ ಆಗಿದ್ದೇವೆ ಎಂದರೆ ಸರಿ. ಆ ಕಾರಣಕ್ಕಾಗಿ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ– ಆರೋಪಿತರ ಪರ ವಕೀಲರಿಂದಃ**– ಏನೂ ಇಲ್ಲ.

ಮರು ವಿಚಾರಣೆಃ– ಇಲ್ಲಾ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ಗಣಕೀಕೃತಗೊಳಿಸಲಾಯಿತು)

ಓ.ಹೇ.ಸಾ.ಸ.ಇ.ಒ.

ಪ್ರಧಾನ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆಎಂಎಫ್‌ಸಿ, ಮಧುಗಿರಿ